## ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮ : ಬೆಂಗಳೂರು ಕೇಂದ್ರೀಯ ವಿಭಾಗ : ಬೆಂಗಳೂರು

ಕ್ರಸಂ ಕರಾಸಾ/ಬೆಂ.ಕೇ.ವಿ/ಸಂ/ವಾಣಿಜ್ಯ/ 2852 /2017-18 ದಿನಾಂಕ: 24-03-2018

### " ಇ-ಟೆಂಡರ್ ಪ್ರಕಟಣೆ ಸಂಖ್ಯೆ: 15/2018 "

ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮ, ಬೆಂಗಳೂರು ಕೇಂದ್ರೀಯ ವಿಭಾಗದ ವ್ಯಾಪ್ತಿಯಲ್ಲಿರುವ ನೆಲಮಂಗಲ ವಾಹನ ನಿಲ್ದಾಣದ ಮುಖ್ಯ ಕಟ್ಟಡದಲ್ಲಿ ಖಾಲಿಯಿರುವ ಮಳಿಗೆ ಸಂಖ್ಯೆ: 02 ಕ್ಕೆ ಹಾಗೂ ವಾಣಿಜ್ಯ ಸಂಕೀರ್ಣದಲ್ಲಿ ಖಾಲಿಯಿರುವ ಮಳಿಗೆ ಸಂಖ್ಯೆ-5 ಮತ್ತು 12 ಗಳಿಗೆ **ಐದು ವರ್ಷಗಳ** ಅವಧಿಗೆ ಪರವಾನಿಗೆದಾರರನ್ನು ಇ-ಪ್ರೊಕ್ಯೂರ್‌ಮೆಂಟ್ ಮುಖಾಂತರ ಆಯ್ಕೆ ಮಾಡಲು ದಿನಾಂಕ: 25-04-2018 ರಂದು ಟೆಂಡರ್ ನಿಗದಿಪಡಿಸಲಾಗಿದೆ. ಇ-ಟೆಂಡರ್‌ನಲ್ಲಿ ಭಾಗವಹಿಸಲು ಆಸಕ್ತಿಯುಳ್ಳವರು ಅರ್ಜಿ ಶುಲ್ಕವನ್ನು ಮತ್ತು ಇ.ಎಂ.ಡಿ ಮೊತ್ತವನ್ನು ವಿಭಾಗೀಯ ನಿಯಂತ್ರಣಾಧಿಕಾರಿ, ಕ.ರಾ.ರ.ಸಾ ನಿಗಮ, ಬೆಂಗಳೂರು ಕೇಂದ್ರಿಯ ವಿಭಾಗ, ಬೆಂಗಳೂರು ರವರ ಹೆಸರಿನಲ್ಲಿ ಡಿಡಿಯನ್ನು ಪಡೆದು, ಮೂಲ ಡಿಡಿಗಳನ್ನು ಟೆಂಡರ್ ತೆರೆಯುವ ಸಮಯದಲ್ಲಿ ಹಾಜರುಪಡಿಸುವುದು. ಇ-ಟೆಂಡರ್ ಅರ್ಜಿಗಳನ್ನು / ದಸ್ತಾವೇಜುಗಳನ್ನು ಇ-ಪ್ರೊಕ್ಯೂರ್‌ಮೆಂಟ್ ವೆಬ್‌ಸೈಟ್ https://www.eproc.Karnataka.gov.in ನಿಂದ ಡೌನ್‌ಲೋಡ್ ಮಾಡಿಕೊಳ್ಳಬಹುದು. ಅರ್ಜಿ ಶುಲ್ಕ ಹಾಗೂ ಇ.ಎಂ.ಡಿ ಮೊತ್ತದ ಡಿಡಿ ಪ್ರತಿಗಳನ್ನು ಹಾಗೂ ವಿಳಾಸದ ಮಾಹಿತಿ ಬಗ್ಗೆ ಆಧಾರ್‌ಕಾರ್ಡ್/ಚುನಾವಣಾ ಗುರುತಿನ ಚೀಟಿ/ಡ್ರೈವಿಂಗ್ ಲೈಸನ್ಸ್ ಹಾಗೂ ಸಂಬಂಧಪಟ್ಟ ದಾಖಲಾತಿಗಳನ್ನು ಇ-ಪೋರ್ಟಲ್‌ನಲ್ಲಿ ದಿನಾಂಕ: 23-04-2018 ರಂದು 12:00 ಗಂಟೆಯವರೆಗೆ ಅಪ್‌ಲೋಡ್ ಮಾಡಬಹುದು. ದಿನಾಂಕ: 25-04-2018 ರಂದು ಇ-ಟೆಂಡರ್‌ನ್ನು ತೆರೆಯುವಾಗ ಭಾಗವಹಿಸಿರುವವರು ಮೂಲ ಡಿಡಿಗಳು ಮತ್ತು ದಾಖಲಾತಿಗಳೊಂದಿಗೆ ತಪ್ಪದೇ ಈ ವಿಭಾಗದ ಸಂಚಾರ ಶಾಖೆಯಲ್ಲಿ ಹಾಜರಿರಬೇಕು. **ಇ-ಟೆಂಡರ್‌ಗೆ ಒಳಪಡುವ ಮಳಿಗೆಗಳ ವಿವರಗಳು ಈ ಕೆಳಕಂಡಂತಿವೆ.**

| ಕ್ರಸಂ. | ಸ್ಥಳದ ಹೆಸರು | ಮಳಿಗೆಗಳ ವಿವರ | ವಿಸ್ತೀರ್ಣ (ಚ.ಅ.ಗಳಲ್ಲಿ) | ಮಾಸಿಕ ಶುಲ್ಕ | ಇ.ಎಂ.ಡಿ (ರೂ) | ಅರ್ಜಿ ಶುಲ್ಕ (ರೂ) |
|---|---|---|---|---|---|---|
| 1 | ನೆಲಮಂಗಲ ಬಸ್ ನಿಲ್ದಾಣ, | ಮಳಿಗೆ ಸಂಖ್ಯೆ-02 | 112 | 12915-00 | 38745-00 | 155-00 |
| 2 | ನೆಲಮಂಗಲ ಬಸ್ ನಿಲ್ದಾಣ, | ಮಳಿಗೆ ಸಂಖ್ಯೆ-05 | 118 | 21534-00 | 64602-00 | 255-00 |
| 3 | ನೆಲಮಂಗಲ ಬಸ್ ನಿಲ್ದಾಣ, | ಮಳಿಗೆ ಸಂಖ್ಯೆ-12 | 118 | 35152-00 | 105456-00 | 416-00 |

ಮೇಲಿನ ಮಳಿಗೆಗಳಿಗೆ ಇ-ಟೆಂಡರ್‌ನಲ್ಲಿ ಭಾಗವಹಿಸುವವರ ಪೈಕಿ ಯಶಸ್ವಿಯಾದವರು ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮದ ಷರತ್ತು ಮತ್ತು ನಿಂಬಂಧನೆಗಳನ್ನು ಹಾಗೂ ಕೇಂದ್ರ/ರಾಜ್ಯ ಸರ್ಕಾರಗಳು ವಿಧಿಸುವ ತೆರಿಗೆಗಳು ಮತ್ತು ಷರತ್ತುಗಳಿಗೆ ಬದ್ಧರಾಗಿರಬೇಕು. ಸಲ್ಲಿಸಿರುವ ಅರ್ಜಿಗಳು ಕ್ರಮಬದ್ಧವಾಗಿಲ್ಲದ ಪಕ್ಷದಲ್ಲಿ ತಿರಸ್ಕರಿಸಲಾಗುವುದು. ಯಾವುದೇ ಕಾರಣ ನೀಡದೆ ಇ-ಟೆಂಡರ್‌ನ್ನು ಪುರಸ್ಕರಿಸುವ / ರದ್ದುಪಡಿಸುವ ಅಥವಾ ಮಾರ್ಪಾಡು ಮಾಡುವ ಹಕ್ಕನ್ನು ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮವು ಕಾಯ್ದಿರಿಸಿಕೊಂಡಿದೆ. ಹೆಚ್ಚಿನ ವಿವರಗಳಿಗಾಗಿ ದೂರವಾಣಿ ಸಂಖ್ಯೆ: 7760990029 & 7760990261 ಗಳನ್ನು ಸಂಪರ್ಕಿಸಲು ಕೋರಲಾಗಿದೆ.

ಸಹಿ/-
ವಿಭಾಗೀಯ ನಿಯಂತ್ರಣಾಧಿಕಾರಿ.
ಕ.ರಾರ.ಸಾ.ನಿಗಮ, ಬೆಂಗಳೂರು ಕೇಂದ್ರೀಯ ವಿಭಾಗ.
ಶಾಂತಿನಗರ, ಬೆಂಗಳೂರು.

ಪ್ರತಿಯನ್ನು ಗೌರವಪೂರ್ವಕವಾಗಿ:-

ಮುಖ್ಯ ಸಂಚಾರ ವ್ಯವಸ್ಥಾಪಕರು (ವಾಣಿಜ್ಯ) ಕ.ರಾ.ರ.ಸಾ.ನಿಗಮ, ಕೇಂದ್ರ ಕಛೇರಿ, ಬೆಂಗಳೂರು ರವರ ಮಾಹಿತಿಗಾಗಿ.
ಮುಖ್ಯ ಗಣಕ ವ್ಯವಸ್ಥಾಪಕರು, ಕ.ರಾ.ರ.ಸಾ. ನಿಗಮ, ಕೇಂದ್ರ ಕಛೇರಿ, ರವರ ಮಾಹಿತಿಗಾಗಿ.
ಎಲ್ಲಾ ವಿಭಾಗೀಯ ನಿಯಂತ್ರಣಾಧಿಕಾರಿಗಳು, ಕ.ರಾ.ರ.ಸಾ.ನಿಗಮ ರವರ ಮಾಹಿತಿಗಾಗಿ.

ಪ್ರತಿಯನ್ನು: ಉಪ ಮುಖ್ಯ ಭದ್ರತಾ ಮತ್ತು ಜಾಗೃತಾಧಿಕಾರಿ/ವಿಭಾಗ ಸಂಚಾಲನಾಧಿಕಾರಿ/ಲೆಕ್ಕಾಧಿಕಾರಿ/ಸಹಾಯಕ ಕಾಮಗಾರಿ ಅಭಿಯಂತರರು/ಕಾನೂನು ಅಧಿಕಾರಿ, ಕ.ರಾ.ರ.ಸಾ. ನಿಗಮ, ಬೆಂಗಳೂರು ಕೇಂದ್ರೀಯ ವಿಭಾಗ ಬೆಂಗಳೂರು ರವರ ಮಾಹಿತಿಗಾಗಿ. ಹಾಗೂ ದಿನಾಂಕ: 25-04-2018 ರಂದು ತಪ್ಪದೇ ಇ-ಟೆಂಡರ್‌ನಲ್ಲಿ ಭಾಗವಹಿಸಲು ಸೂಚಿಸಲಾಗಿದೆ.

ವಿಭಾಗೀಯ ನಿಯಂತ್ರಣಾಧಿಕಾರಿ.